ವಿಕಲಚೇತನ ಕಛೇರಿಯಲ್ಲಿ ಸಿಬ್ಬಂದಿಯ ಕೊರತೆ

1453(934); ಶ್ರೀಮತಿ ಜೊಲ್ಲೆ ಶಶಿಕಲಾ ಅಣ್ಣಾಸಾಹೇಬ್ (ನಿಪ್ಪಾಣಿ)

ಅ) ವಿಕಲಚೇತನರ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿವರ ನೀಡುವುದು);

ಆ) ಹಾಗಿದ್ದಲ್ಲಿ, ಅವುಗಳ ಭರ್ತಿಗಾಗಿ ಕೈಗೊಂಡಿರುವ ಕ್ರಮಗಳೇನು;

ಇ) ವಿಕಲಚೇತನರಿಗಾಗಿ ಸರ್ಕಾರದಲ್ಲಿರುವ ವಿವಿಧ ಬಗೆಯ ಸೌಲಭ್ಯಗಳು ಯಾವುವು; ಅವುಗಳನ್ನು ಪಡೆಯಲು ಅನುಸರಿಸಬೇಕಾಗಿರುವ ಕ್ರಮಗಳೇನು;

ಈ) ವಿಕಲಚೇತನರು ಉಚಿತ ಬಸ್ ಪಾಸ್ ಪಡೆಯುವಲ್ಲಿ ಆಗುತ್ತಿರುವ ತೊಂದರೆಯು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ನಿವಾರಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀಮತಿ ಉಮಾಶ್ರೀ (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) ಬಂದಿದೆ.

- ಜಿಲ್ಲಾವಾರು ಮಾಹಿತಿಯನ್ನು ಅನುಬಂಧ–01 ರಲ್ಲಿ ಲಗತ್ತಿಸಿದೆ.
- ಈ ಇಲಾಖೆಯಡಿ ತಾಲ್ಲೂಕುವಾರು ಕಛೇರಿಗಳು ರಚನೆಯಾಗಿರುವುದಿಲ್ಲ.

ಆ)

- ಖಾಲಿ ಇರುವ 310 ಹುದ್ದೆಗಳಲ್ಲಿ 83 ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕರ್ನಾಟಕ ಲೋಕಸೇವಾ ಆಯೋಗ ಬೆಂಗಳೂರು ಇವರಿಗೆ ಅನುಕ್ರಮವಾಗಿ ದಿನಾಂಕ 03.09.2014, 26.09.2014 ಮತ್ತು 06.11.2014 ರಂದು ಪತ್ರ ಬರೆಯಲಾಗಿರುತ್ತದೆ.

- ವಿವಿಧ ವೃಂದದ 08 ಹುದ್ದೆಗಳಿಗೆ ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು ಇವರಿಂದ ಆಯ್ಕೆಪಟ್ಟಿ ಬಂದಿದ್ದು, ನೇಮಕಾತಿಗೆ ಕ್ರಮವಹಿಸಲಾಗುತ್ತಿದೆ.
- 164 ಹುದ್ದೆಗಳ ಭರ್ತಿಗಾಗಿ ಆರ್ಥಿಕ ಇಲಾಖೆ ಸಹಮತಿ ಕೋರಲಾಗಿದೆ.
- ಉಳಿದ 55 ಹುದ್ದೆಗಳು ಮುಂಬಡ್ತಿಯಿಂದ ಭರ್ತಿ ಮಾಡಬೇಕಾಗಿದ್ದು, ಕ್ರಮವಹಿಸಲಾಗುತ್ತಿದೆ.

ಇ)

- ವಿಕಲಚೇತನರಿಗಾಗಿ ಸರ್ಕಾರದಲ್ಲಿರುವ ವಿವಿಧ ಬಗೆಯ ಸೌಲಭ್ಯಗಳ/ಯೋಜನೆಗಳ ವಿವರವನ್ನು ಅನುಬಂಧ–(2)ರಲ್ಲಿ ಲಗತ್ತಿಸಿದೆ.
- ಇಲಾಖೆಯ ವಿವಿಧ ಯೋಜನೆಯಡಿ ಸೌಲಭ್ಯಗಳನ್ನು ಪಡೆಯಲು ಸಂಬಂಧಪಟ್ಟ ವಿಕಲಚೇತನರು ತಮ್ಮ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಛೇರಿಗಳಲ್ಲಿ ಅರ್ಜಿಯನ್ನು ಪಡೆದು ಸೌಲಭ್ಯಗಳನ್ನು ಪಡೆಯಬಹುದಾಗಿರುತ್ತದೆ ಹಾಗೂ ಇಲಾಖೆಯ ವೆಬ್ ಸೈಟ್‌ನಲ್ಲಿ ಯೋಜನೆಗಳ ಹಾಗೂ ಅರ್ಜಿ ನಮೂನೆಗಳನ್ನು ಮತ್ತು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿಯ ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಅಳವಡಿಸಿದ್ದು, ವೆಬ್ ಸೈಟ್‌ನಿಂದಲೂ ಮಾಹಿತಿಯನ್ನು ಪಡೆಯಬಹುದಾಗಿರುತ್ತದೆ.

ಈ)

- ವಿಕಲಚೇತನರು ಉಚಿತ ಬಸ್ ಪಾಸ್ ಪಡೆಯುವಲ್ಲಿ ಆಗುತ್ತಿರುವ ತೊಂದರೆಯು ಸರ್ಕಾರದ ಗಮನಕ್ಕೆ ಬಂದಿರುತ್ತದೆ.
- ಈ ಸಂಬಂಧ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಬೆಂಗಳೂರು ಇವರಿಗೆ ದಿ: 02–07–2015 ರಂದು ಪತ್ರ ಬರೆಯಲಾಗಿದೆ.

ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀಮತಿ ಜೊಲ್ಲೆ ಶಶಿಕಲಾ ಅಣ್ಣಾಸಾಹೇಬ್ (ನಿಪ್ಪಾಣಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 934 ಕ್ಕೆ ಉತ್ತರ ಒದಗಿಸುವ ಬಗ್ಗೆ.

ಅನುಬಂಧ-1

ಕ್ರ ಸಂ	ಜಿಲ್ಲೆಯ ಹೆಸರು	ಸಮೂಹ ಎ			ಸಮೂಹ ಬಿ			ಸಮೂಹ ಸಿ			ಸಮೂಹ ಡಿ		
		ಮಂಜೂರಾದ ಹುದ್ದೆಗಳು	ಭರ್ತಿ	ಖಾಲಿ	ಮಂಜೂರಾದ ಹುದ್ದೆಗಳು	ಭರ್ತಿ	ಖಾಲಿ	ಮಂಜೂರಾದ ಹುದ್ದೆಗಳು	ಭರ್ತಿ	ಖಾಲಿ	ಮಂಜೂರಾದ ಹುದ್ದೆಗಳು	ಭರ್ತಿ	ಖಾಲಿ
1	ಬೆಂಗಳೂರು	04	03	01	06	-	06	53	40	13	47	8	39
2	ಬೆಂಗಳೂರು (ಗ್ರಾ)	-	-	-	1	-	1	2	1	1	1	-	1
3	ಬಳ್ಳಾರಿ	-	-	-	3	01	02	10	5	5	6	2	4
4	ಬೆಳಗಾವಿ	-	-	-	3	-	3	14	-	14	7	-	7
5	ಬೀದರ್	-	-	-	1	1	-	2	1	1	1	-	1
6	ಬಾಗಲಕೋಟೆ	-	-	-	1	1	-	2	-	2	1	-	1
7	ವಿಜಾಪುರ	-	-	-	1	1	-	2	-	2	1	-	1
8	ಚಾಮರಾಜನಗರ	-	-	-	1	-	1	2	-	2	1	1	-
9	ಚಿಕ್ಕಬಳ್ಳಾಪುರ	-	-	-	1	1	-	2	-	2	1	-	1
10	ಚಿಕ್ಕಮಗಳೂರು	-	-	-	1	-	1	2	-	2	1	1	-
11	ಚಿತ್ರದುರ್ಗ	-	-	-	1	1	-	2	-	2	1	1	-
12	ದಕ್ಷಿಣಕನ್ನಡ	-	-	-	1	-	1	2	-	2	1	-	1

13	ರಾಮನಗರ	-	-	-	2	-	2	19	08	11	7	2	5
14	ರಾಯಚೂರು	-	-	-	3	1	2	28	08	20	15	6	9
15	ಗದಗ	-	-	-	1	1	-	2	-	2	1	1	-
16	ಗುಲ್ಬರ್ಗ				3	1	2	30	08	22	18	2	16
17	ಹಾಸನ	-	-	-	1	-	1	2	1	1	1	-	1
18	ಹಾವೇರಿ	-	-	-	1	-	1	2	1	1	1	-	1
19	ಕೊಡಗು	-	-	-	1	-	1	2	-	2	1	-	1
20	ಕೋಲಾರ	-	-	-	1	1	-	2	-	2	1	-	1
21	ಕೊಪ್ಪಳ	-	-	-	1	1	-	2	-	2	1	-	1
22	ಮಂಡ್ಯ	-	-	-	1	-	1	2	1	1	1	-	1
23	ಮೈಸೂರು	1	1	-	4	1	3	59	20	39	28	10	18
24	ರಾಯಚೂರು	-	-	-	2	1	1	2	1	1	1	-	1
25	ರಾಮನಗರ	-	-	-	1	1	-	2	1	1	1	-	1
26	ಶಿವಮೊಗ್ಗ	-	-	-	2	1	1	2	-	2	1	1	-
27	ತುಮಕೂರು	-	-	-	1	-	1	2	-	2	1	1	-
28	ಉಡುಪಿ	-	-	-	1	1	-	2	-	2	1	-	1
29	ಉತ್ತರಕನ್ನಡ	-	-	-	1	1	-	2	-	2	1	-	1
30	ಯಾದಗಿರಿ	-	-	-	1	-	1	2	1	1	1	-	1
		5	4	1	49	17	32	259	97	162	151	36	115

ಮಾನ್ಯ ವಿಧಾನ ಸಭೆಯ ಸದಸ್ಯರಾದ ಶ್ರೀಮತಿ ಜೊಲ್ಲೆ ಶಶಿಕಲಾ ಅಣ್ಣಾಸಾಹೇಬ್ (ನಿಪ್ಪಾಣಿ) ಇವರ ಚಕ್ಕೆ ಗುರುತಿಲ್ಲದ ಪ್ರಶ್ನೆ ಸಂ: 934 ಕ್ಕೆ

ಅನುಬಂಧ–02

1. ವಿಕಲಚೇತನ ಮಕ್ಕಳಿಗಾಗಿ ವಿಶೇಷ ಶಾಲೆಗಳು:

ಸರ್ಕಾರದಿಂದ ಹಾಗೂ ಸರ್ಕಾರದ ಅನುದಾನಿತ ಸ್ವಯಂ ಸೇವಾ ಸಂಸ್ಥೆಗಳ ಮೂಖಾಂತರ ದೃಷ್ಠಿದೋಷವುಳ್ಳ, ಶ್ರವಣದೋಷವುಳ್ಳ, ಬುದ್ಧಿಮಾಂದ್ಯ/ಸಿ.ಪಿ., ದೈಹಿಕ ಅಂಗವಿಕಲ ಮಕ್ಕಳಿಗಾಗಿ ವಿಶೇಷ ವಸತಿಯು/ ವಸತಿ ರಹಿತ ಶಾಲೆಗಳನ್ನು ನಡೆಸಲಾಗುತ್ತಿದೆ. ಈ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಶಿಕ್ಷಣ, ಊಟ, ವಸತಿ ಹಾಗೂ ಇತರೆ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

2. ವಿಕಲಚೇತನ ವಿದ್ಯಾರ್ಥಿಗಳಿಗೆ ಶೀಷ್ಯವೇತನ ಹಾಗೂ ಪ್ರೋತ್ಸಾಹ ಬಹುಮಾನ ಯೋಜನೆ:

ಈ ಕಾರ್ಯಕ್ರಮದಡಿ ಒಂದನೇ ತರಗತಿಯಿಂದ ವಿಶ್ವವಿದ್ಯಾನಿಲಯದ ಶಿಕ್ಷಣ ಮಟ್ಟದವರೆಗೆ ಓದುತ್ತಿರುವ ಅರ್ಹ ವಿಕಲಚೇತನರಿಗೆ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ. ಮತ್ತು ಪಬ್ಲಿಕ್ ಪರೀಕ್ಷೆಗಳಲ್ಲಿ ಶೇ. 60ಕ್ಕಿಂತ ಹೆಚ್ಚಿಗೆ ಅಂಕ ಪಡೆದ ಪ್ರತಿಭಾನ್ವಿತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ.

3. ಬ್ರೈಲ್ ಮುದ್ರಣಾಲಯ:

ಮೈಸೂರಿನಲ್ಲಿರುವ ಬ್ರೈಲ್ ಮುದ್ರಣಾಲಯದ ಮೂಲಕ ಬ್ರೈಲ್ ಪುಸ್ತಕಗಳನ್ನು ಮುದ್ರಿಸಿ, ಸಂಬಂಧ ಪಟ್ಟ ದೃಷ್ಟಿದೋಷವುಳ್ಳ ಶಾಲೆಗಳ ಮೂಲಕ ದೃಷ್ಠಿದೋಷವುಳ್ಳ ಮಕ್ಕಳಿಗೆ ಉಚಿತವಾಗಿ ಬ್ರೈಲ್ ಪುಸ್ತಕಗಳನ್ನು ಸರಬರಾಜು ಮಾಡಲಾಗುತ್ತಿದೆ.

4. ವಿಶೇಷ ಶಿಕ್ಷಕರ ತರಬೇತಿ ಕೇಂದ್ರ:

ರಾಜ್ಯದಲ್ಲಿ ದೃಷ್ಟಿದೋಷವುಳ್ಳ ಮತ್ತು ಶ್ರವಣದೋಷವುಳ್ಳ ಮಕ್ಕಳ ವಿಶೇಷ ಶಾಲೆಗಳಲ್ಲಿ ಪರಿಣತಿ ಹೊಂದಿದ ವಿಶೇಷ ಶಿಕ್ಷಕರ ಕೊರತೆ ಇರುವುದನ್ನು ಮನಗಂಡು ಇದನ್ನು ನೀಗಿಸಲು ಪ್ರಾಥಮಿಕ ಹಂತದ ದೃಷ್ಟಿದೋಷವುಳ್ಳ/ಶ್ರವಣದೋಷವುಳ್ಳ ಮಕ್ಕಳಿಗೆ ಬೋಧನೆ ಮಾಡುವ ಶಿಕ್ಷಕರಿಗೆ ಡಿಪ್ಲೋಮಾ ತರಬೇತಿ ನೀಡುವ ಸಲುವಾಗಿ ವಿಶೇಷ ಶಿಕ್ಷಕರ ತರಬೇತಿ ಕೇಂದ್ರವನ್ನು ಮೈಸೂರಿನಲ್ಲಿ ಸ್ಥಾಪಿಸಲಾಗಿದೆ.

5. ವಿಕಲಚೇತನ ನೌಕರರಿಗೆ ಮತ್ತು ತರಬೇತುದಾರರಿಗೆ ವಸತಿ ನಿಲಯ:

ಬೆಂಗಳೂರಿನಲ್ಲಿ ವಿಕಲಚೇತನ ನೌಕರರ ಮತ್ತು ತರಬೇತಿದಾರ ಮಹಿಳೆಯರಿಗೆ ಹಾಗೂ ಪುರುಷರಿಗೆ ಪ್ರತ್ಯೇಕವಾದ ಒಂದೊಂದು ವಸತಿ ನಿಲಯವನ್ನು ಇಲಾಖೆಯಿಂದ ನಡೆಸಲಾಗುತ್ತಿದೆ. ಈ ವಸತಿ ನಿಲಯದಲ್ಲಿ ಪ್ರವೇಶ ಪಡೆಯಲು ಅರ್ಜಿದಾರರ ವಾರ್ಷಿಕ ಆದಾಯ ರೂ. 24,000/– ಗಳಿಗಿಂತ ಕಡಿಮೆ ಇರಬೇಕು. ಪುರುಷರ ಹಾಗೂ ಮಹಿಳೆಯರ ವಸತಿ ನಿಲಯದಲ್ಲಿ 50 ನಿವಾಸಿಗಳನ್ನು ದಾಖಲೆ ಮಾಡಿಕೊಳ್ಳಲು ಅವಕಾಶವಿದೆ.

6. ಆಧಾರ ಸ್ವಯಂ ಉದ್ಯೋಗಕ್ಕಾಗಿ ಸಹಾಯಧನ ಯೋಜನೆ:

ವಿಕಲಚೇತನರು ಸ್ವಯಂ ಉದ್ಯೋಗ ಕೈಗೊಂಡು ಜೀವನ ಸಾಗಿಸಲು ಅನುಕೂಲವಾಗುವಂತೆ ಆಧಾರ ಎಂಬ ಯೋಜನೆಯನ್ನು ಸರ್ಕಾರ ಕಾರ್ಯರೂಪಕ್ಕೆ ತಂದಿದೆ. ಈ ಕಾರ್ಯಕ್ರಮದಡಿ ಪ್ರತಿ ಫಲಾನುಭವಿಗಳಿಗೆ ರೂ. 15,000/– ಮೊತ್ತದ ಪೆಟ್ಟಿಗೆ ಅಂಗಡಿಯನ್ನು ಉಚಿತವಾಗಿ ಹಾಗೂ ರೂ. 20,000/– ನಿರ್ವಹಣಾ ಬಂಡವಾಳವನ್ನು ಸಾಲದ ರೂಪದಲ್ಲಿ ನೀಡಲಾಗುತ್ತಿದೆ.

7. ರಾಷ್ಟ್ರೀಯ ವಿಕಲಚೇತನರ ಹಣಕಾಸು ಅಭಿವೃದ್ಧಿ ನಿಗಮ:

ವಿಕಲಚೇತನರಿಗೆ ಪ್ರಯೋಜನವಾಗುವಂತೆ ಸ್ವಯಂ ಉದ್ಯೋಗ ಮತ್ತು ಆರ್ಥಿಕ ಚಟುವಟಿಕೆ ಉತ್ತೇಜಿಸಲು ವಿಕಲಚೇತನರು ಉನ್ನತ ವ್ಯಾಸಂಗ

ಮಾಡಲು ವೃತ್ತಿಪರ ಶಿಕ್ಷಣ ಪಡೆಯಲು, ಉತ್ಪಾದನಾ ಘಟಕ ಸ್ಥಾಪಿಸಲು ಅವರು ತಯಾರಿಸಿದ ವಸ್ತುಗಳಿಗೆ ಮಾರುಕಟ್ಟೆ ಒದಗಿಸಲು ಸಹಾಯ ಮಾಡಲು, ರಾಷ್ಟ್ರೀಯ ವಿಕಲಚೇತನರ ಹಣಕಾಸು ಅಭಿವೃದ್ಧಿ ನಿಗಮ ಕಾರ್ಯಾರಂಭ ಮಾಡಿದೆ. ವಿಕಲಚೇತನರು ಸಲ್ಲಿಸುವ ಕ್ರಿಯಾ ಯೋಜನಾ ವರದಿ ಆಧರಿಸಿ ಸಾಲ ಸೌಲಭ್ಯವನ್ನು ನೀಡಲಾಗುವುದು.

8. ಉದ್ಯೋಗಕೋಶ:

ವಿವಿಧ ರೀತಿಯ ಅಂಗವಿಕಲತೆಯನ್ನು ಹೊಂದಿರುವ ವ್ಯಕ್ತಿಗಳಿಗೆ ಅವರ ಅವಶ್ಯಕತೆಗನುಗುಣವಾಗಿ ತರಬೇತಿಯನ್ನು ನೀಡಿ ಉದ್ಯೋಗಾವಕಾಶವನ್ನು ಒದಗಿಸುವ ಸಲುವಾಗಿ ಸರ್ಕಾರೇತರ ಸಂಸ್ಥೆಯಾದ ಮೆ. ಎನೇಬಲ್ ಇಂಡಿಯಾ, ಕೋರಮಂಗಲ, ಬೆಂಗಳೂರು ವತಿಯಿಂದ ಬೆಂಗಳೂರಿನಲ್ಲಿ ಅನುಷ್ಠಾನ ಗೊಳಿಸಲಾಗುತ್ತಿದೆ.

9. ವಿಕಲಚೇತನರಿಗೆ ಸಾಧನ ಸಲಕರಣೆಗಳ ಪೂರೈಕೆ:

ವಿಕಲಚೇತನರ ದೈನಂದಿನ ಚಟುವಟಿಕೆಗಳಿಗೆ ಅಗತ್ಯವಾಗಿರುವ ತ್ರಿಚಕ್ರ ವಾಹನಗಳು, ಗಾಲಿಕುರ್ಚಿ, ಕ್ರಚಸ್, ಕೃತಕಾಂಗಗಳು, ಕ್ಯಾಲಿಪರ್ಸ್, ಶ್ರವಣ ಸಾಧನಗಳು, ದೃಷ್ಟಿದೋಷವುಳ್ಳವರು ಉಪಯೋಗಿಸುವ ಬ್ರೈಲ್ ಗಡಿಯಾರ, ಬಿಳಿಕೋಲು ಇತ್ಯಾದಿಗಳನ್ನು ಉಚಿತವಾಗಿ ವಿತರಿಸುವುದು ಈ ಯೋಜನೆಯ ಉದ್ದೇಶವಾಗಿರುತ್ತದೆ.

10. ಅಂಗವೈಕಲ್ಯವನ್ನು ಶಸ್ತ್ರ ಚಿಕಿತ್ಸೆಯ ಮೂಲಕ ನಿವಾರಣೆಗೊಳಿಸಲು ಹಾಗೂ ಕಡಿಮೆಮಾಡಲು ವೈದ್ಯಕೀಯ ಪರಿಹಾರ ನಿಧಿ ಯೋಜನೆ:

ಈ ಯೋಜನೆಯಡಿಯಲ್ಲಿ ಅರ್ಹ ವಿಕಲಚೇತನ ವ್ಯಕ್ತಿಗಳಿಗೆ ಅಂಗವಿಕಲತೆಯನ್ನು ನಿವಾರಿಸಲು ಶಸ್ತ್ರ ಚಿಕಿತ್ಸೆಗಾಗಿ ಸುಸಜ್ಜಿತ ಖಾಸಗಿ ಆಸ್ಪತ್ರೆ, ಸರ್ಕಾರಿ ಆಸ್ಪತ್ರೆ ಹಾಗೂ ಸಂಜಯಗಾಂಧಿ ಆಸ್ಪತ್ರೆಗಳಲ್ಲಿ ವೈದ್ಯಕೀಯ ಚಿಕಿತ್ಸೆಗಾಗಿ ಗರಿಷ್ಠ ರೂ.1.00 ಲಕ್ಷಗಳವರೆಗೆ ಧನಸಹಾಯ ನೀಡುವ ಸೌಲಭ್ಯವಿದೆ.

11. ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ ಯೋಜನೆ:

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ, ಜಿಲ್ಲಾ ನಿರ್ವಾಹಣ ಸಮಿತಿಗಳ ಮಾರ್ಗದರ್ಶನ / ನಡವಳಿಯಂತೆ ದಾವಣಗೆರೆ, ಮೈಸೂರು, ಗದಗ, ಹಾವೇರಿ, ರಾಯಚೂರು, ಬೆಳಗಾವಿ, ಉಡುಪಿ, ವಿಜಯಾಪುರ, ಚಿತ್ರದುರ್ಗ, ದಕ್ಷಿಣ ಕನ್ನಡ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ರಾಮನಗರ ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ವೈದ್ಯಕೀಯ ಮಹಾವಿದ್ಯಾಲಯ/ ಭಾರತೀಯ ರೆಡ್‌ಕ್ರಾಸ್/ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ ಅನುಷ್ಠಾನಗೊಳಿಸಲಾಗುತ್ತಿದೆ.

12. ಪೋಷಣಾ ಭತ್ಯೆ:

ವಿಕಲಚೇತನರ ಮಾಶಾಸನ / ಪೋಷಣಾ ಭತ್ಯೆ ಮಂಜೂರಾತಿಗಾಗಿ ಗ್ರಾಮೀಣ ಮಟ್ಟದಲ್ಲಿ ವಾರ್ಷಿಕ ರೂ.12,000/– ಮತ್ತು ನಗರ ಪ್ರದೇಶದಲ್ಲಿ ರೂ.17,000/–ಕ್ಕಿಂತ ಕಡಿಮೆ ಆದಾಯವಿರುವ ಕುಟುಂಬದಲ್ಲಿರುವ ಶೇ.40 ರಿಂದ 75ರಷ್ಟು ಅಂಗವಿಕಲತೆ ಪ್ರಮಾಣ ಇರುವ ವಿಕಲಚೇತನರಿಗೆ ಮಾಹೆಯಾನ ರೂ.500/– ರಂತೆ ಮತ್ತು ಶೇ.75ಕ್ಕಿಂತ ಮೇಲ್ಪಟ್ಟು ಅಂಗವಿಕಲತೆಯ ಪ್ರಮಾಣವಿರುವ ವಿಕಲಚೇತನರಿಗೆ ಮಾಹೆಯಾನ ರೂ.1200/– ಪೋಷಣಾ ಭತ್ಯಯನ್ನು ಆಯಾ ತಾಲ್ಲೂಕಿನ ತಹಸೀಲ್ದಾರ್ ಮೂಲಕ ಮಂಜೂರಾತಿ ಪಡೆಯಲು ಅವಕಾಶವಿರುತ್ತದೆ.

13. ವಿಕಲಚೇತನರಿಗೆ ಗುರುತಿನ ಚೀಟಿ ನೀಡುವ ಯೋಜನೆ:

ವಿಕಲಚೇತನರು ಸರ್ಕಾರದಿಂದ ಸಿಗುವ ಅನೇಕ ಸೌಲಭ್ಯಗಳನ್ನು ಪಡೆದುಕೊಳ್ಳಲು ಅನುಕೂಲವಾಗುವಂತೆ ಅವರಿಗೆ ಗುರುತಿನ ಚೀಟಿಗಳನ್ನು ವಿತರಿಸಲಾಗುತ್ತಿದೆ.

14. ಸಮಾಜ ಸೇವಾ ಸಂಕೀರ್ಣ/ಮಂದಮತಿ ಮಹಿಳೆಯರ ಅನುಪಾಲನಾ ಗೃಹ:

ನಿರ್ಗತಿಕ ಪುರುಷ ಬುದ್ಧಿಮಾಂದ್ಯ / ಮಾನಸಿಕ ವಿಕಲಚೇತನರಿಗೆ ಊಟ, ವಸತಿ, ವೈದ್ಯಕೀಯ ಸೌಲಭ್ಯ ಸಂರಕ್ಷಣೆ ಒದಗಿಸುವ ಉದ್ದೇಶದಿಂದ

ಸಮಾಜ ಸೇವಾ ಸಂಕೀರ್ಣವು ಬೆಂಗಳೂರಿನಲ್ಲಿ ಸ್ಥಾಪಿತವಾಗಿದೆ. ಮಂದಮತಿ ಮಹಿಳೆಯರಿಗಾಗಿ ಇಲಾಖೆಯಿಂದ ಬೆಂಗಳೂರು ಮತ್ತು ಹುಬ್ಬಳ್ಳಿಯಲ್ಲಿ ಅನುಪಾಲನಾ ಗೃಹಗಳನ್ನು ನಡೆಸಲಾಗುತ್ತಿದೆ.

15. ಬುದ್ದಿಮಾಂದ್ಯ ವ್ಯಕ್ತಿಗಳ ತಂದೆ / ತಾಯಿ /ಪೋಷಕರಿಗೆ ಸಾಮೂಹಿಕ ವಿಮಾ ಯೋಜನೆ:

ಬುದ್ಧಿಮಾಂದ್ಯ ವ್ಯಕ್ತಿಗಳ ತಂದೆ/ ತಾಯಿ/ ಪೋಷಕರ ಹೆಸರಲ್ಲಿ, ಭಾರತೀಯ ಜೀವ ವಿಮಾ ನಿಗಮಕ್ಕೆ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯದಿಂದ ವಾರ್ಷಿಕ ವಿಮಾ ಕಂತನ್ನು ಪಾವತಿ ಮಾಡಿ, ವಿಮಾ ಸೌಲಭ್ಯವನ್ನು ಒದಗಿಸಲಾಗುತ್ತದೆ. ಬುದ್ಧಿಮಾಂದ್ಯ ವ್ಯಕ್ತಿಗಳ ತಂದೆ/ ತಾಯಿ/ ಪೋಷಕರ ನಿಧನದ ನಂತರ ಬುದ್ಧಿಮಾಂದ್ಯ ವ್ಯಕ್ತಿಗಳ ಪೋಷಣೆಗಾಗಿ ಜೀವ ವಿಮಾ ನಿಗಮದಿಂದ ನಾಮನಿರ್ದೇಶಿತರಿಗೆ ತಲಾ ರೂ. 20,000/–ರಂತೆ ವಿಮಾ ಹಣ ದೊರೆಯುತ್ತದೆ.

16. ರಾಜ್ಯ ಪ್ರಶಸ್ತಿ:

ರಾಜ್ಯ ಸರ್ಕಾರವು ವಿಕಲಚೇತನರ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ 8 ಸ್ವಯಂ ಸಂಸ್ಥೆಗಳಿಗೆ, 2 ಅಸಾಧಾರಣ ಸಂಸ್ಥೆಗಳಿಗೆ, ವಿಕಲಚೇತನ ಮಕ್ಕಳ ಶಿಕ್ಷಣ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ 5 ವಿಶೇಷ ಶಿಕ್ಷಕರಿಗೆ ಮತ್ತು ವಿಶೇಷ ಸಾಧನೆಗೈದ 15 ವ್ಯಕ್ತಿಗಳನ್ನು ಪ್ರತಿವರ್ಷವೂ ಗುರುತಿಸಿ ವಿಶ್ವ ವಿಕಲಚೇತನರ ದಿನಾಚರಣೆಯ ದಿನದಂದು ಅವರನ್ನು ಗೌರವಿಸಿ ರಾಜ್ಯ ಪ್ರಶಸ್ತಿಯನ್ನು ನೀಡಲಾಗುತ್ತಿದೆ.

17. ಮಾಹಿತಿ ಹಾಗೂ ಸಲಹಾ ಕೇಂದ್ರ:

ವಿಕಲಚೇತನರಿಗೆ ಹಾಗೂ ಹಿರಿಯ ನಾಗರಿಕರಿಗೆ ರಾಜ್ಯ ಸರ್ಕಾರದ ಹಾಗೂ ಕೇಂದ್ರ ಸರ್ಕಾರದ ಯೋಜನೆಗಳ ಮಾಹಿತಿಯನ್ನು ವಿಶೇಷ ಶಾಲೆಗಳು ಹಾಗೂ ವೃತ್ತಿ ತರಬೇತಿ ಸಂಸ್ಥೆಗಳ ಬಗ್ಗೆ ಮಾಹಿತಿ ಹಾಗೂ ವಿಕಲಚೇತನರಿಗೆ ಬೇಕಾಗಿರುವ ಮಾಹಿತಿಗಳನ್ನು ಈ ಕೇಂದ್ರದಲ್ಲಿ

ನೀಡಲಾಗುವುದು. ಇದಲ್ಲದೆ ರಾಜ್ಯ ಸರ್ಕಾರ, ಕೇಂದ್ರ ಸರ್ಕಾರ, ಸಾರ್ವಜನಿಕ ಉದ್ಯಮ ಹಾಗೂ ಖಾಸಗಿ ಉದ್ಯಮಗಳಲ್ಲಿ ವಿಕಲಚೇತನರಿಗೆ ಉದ್ಯೋಗ ಅವಕಾಶಗಳ ಬಗ್ಗೆ ಮಾಹಿತಿಯನ್ನು ಈ ಕೇಂದ್ರದಲ್ಲಿ ನೀಡಲಾಗುವುದು.

18. ವಿಕಲಚೇತನ ಮಹಿಳಾ ಉದ್ಯೋಗಸ್ಥ ಹಾಗೂ ವಿದ್ಯಾರ್ಥಿಯರ ವಸತಿ ನಿಲಯಗಳು:

ವಿಕಲಚೇತನ ಮಹಿಳಾ ಉದ್ಯೋಗಸ್ಥರಿಗೆ ಹಾಗೂ ವಿದ್ಯಾರ್ಥಿನಿಯರಿಗೆ ಪ್ರತಿ ಜಿಲ್ಲೆಗೆ ಒಂದರಂತೆ ವಸತಿ ನಿಲಯಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಸ್ಥಾಪಿಸಲಾಗಿರುತ್ತದೆ. ವಸತಿ ನಿಲಯದಲ್ಲಿ 50 ಮಹಿಳಾ ವಿಕಲಚೇತನ ವಿದ್ಯಾರ್ಥಿಗಳಿಗೆ ಹಾಗೂ ತರಬೇತಿದಾರರಿಗೆ ವಸತಿ ಮತ್ತು ಊಟೋಪಚಾರ ವ್ಯವಸ್ಥೆಗಳನ್ನು ಕಲ್ಪಿಸಲಾಗುತ್ತಿದೆ.

19. ಮಾನಸ ಕೇಂದ್ರಗಳು:

ಮಾನಸಿಕ ಅಸ್ವಸ್ಥರಿಗೆ ಆಶ್ರಯ ಕಲ್ಪಿಸಲು ತರಬೇತಿ ನೀಡಿ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರಲು ಮಾನಸ ಕೇಂದ್ರಗಳನ್ನು ಬೆಂಗಳೂರು ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಪ್ರಾರಂಭಿಸಲಾಗಿದೆ.

20. ಗ್ರಾಮೀಣ ಪುನರ್ವಸತಿ ಯೋಜನೆ:

ಈ ಯೋಜನೆಯಡಿಯಲ್ಲಿ ವಿಕಲಚೇತನರು ಇರುವ ಸ್ಥಳದಲ್ಲಿಯೇ ವಿವಿಧ ಇಲಾಖೆಯ ಸೌಲಭ್ಯಗಳನ್ನು ಅವರ ಮನೆಬಾಗಿಲಿಗೆ ವಿಕಲಚೇತನರ ಮುಖಾಂತರ ತಲುಪಿಸುವುದು ಈ ಯೋಜನೆಯ ಉದ್ದೇಶವಾಗಿರುತ್ತದೆ. ಈ ಯೋಜನೆಯನ್ನು ರಾಜ್ಯದ ಎಲ್ಲಾ 30 ಜಿಲ್ಲೆಗಳ 176 ತಾಲ್ಲೂಕುಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರನ್ನು ಹಾಗೂ ತಾಲ್ಲೂಕು ಪಂಚಾಯಿತಿ ಮಟ್ಟದಲ್ಲಿ ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರನ್ನು ಗೌರವಧನದ ಆಧಾರದ ಮೇಲೆ ನೇಮಕ ಮಾಡಲಾಗಿರುತ್ತದೆ. ಈ ಯೋಜನೆಯಲ್ಲಿ 5828 ಸಮರ್ಥ ವಿಕಲಚೇತನರಿಗೆ ಉದ್ಯೋಗಾವಕಾಶಗಳನ್ನು ಕಲ್ಪಿಸಲಾಗಿದೆ.

21. ವಿಕಲಚೇತನ ವ್ಯಕ್ತಿಗಳಿಗಾಗಿ ಸಾಂಸ್ಕೃತಿಕ ಚಟುವಟಿಕೆ ಹಾಗೂ ಕ್ರೀಡೆಗಳ ಪ್ರೋತ್ಸಾಹಧನ ಯೋಜನೆ (ಸಾಧನೆ ಮತ್ತು ಪ್ರತಿಭೆ):

ವಿಕಲಚೇತನರು ನೀಡುವ ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡುವ ಸಲುವಾಗಿ "ಪ್ರತಿಭೆ" ಎಂಬ ಯೋಜನೆಯನ್ನು ಮತ್ತು ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಕ್ರೀಡಾಕೂಟದಲ್ಲಿ ಪಾಲ್ಗೊಂಡ ವಿಕಲಚೇತನ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡಲು "ಸಾಧನೆ" ಎಂಬ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ.

22. ವಿಕಲಚೇತನ ವ್ಯಕ್ತಿಗಳನ್ನು ಸಾಮಾನ್ಯರು ಮದುವೆಯಾದಲ್ಲಿ ಪ್ರೋತ್ಸಾಹ ಧನ ನೀಡುವ ಯೋಜನೆ:

ವಿಕಲಚೇತನ ಯುವಕ/ಯುವತಿಯರನ್ನು ವಿವಾಹವಾಗುವ ಸಾಮಾನ್ಯ ಯುವಕ/ ಯುವತಿಯರಿಗೆ ನಿರಂತರವಾಗಿ ಮಾಸಿಕ ಆದಾಯ ದೊರಕಿಸಲು ವಿಕಲಚೇತನರ ವ್ಯಕ್ತಿಯ ಹೆಸರಿನಲ್ಲಿ ರೂ. 50,000/– ಗಳನ್ನು ಹೂಡಿಕೆಯ ರೂಪದಲ್ಲಿ ನೀಡಿ ವಿಕಲಚೇತನರನ್ನು ಮದುವೆಯಾದ ಸಾಮಾನ್ಯ ವ್ಯಕ್ತಿ ಹಾಗೂ ವಿಕಲಚೇತನ ವ್ಯಕ್ತಿಗಳು ಜಂಟಿಯಾಗಿ 05 ವರ್ಷಗಳ ಅವಧಿಗೆ ಭದ್ರತಾ ಠೇವಣಿಯಲ್ಲಿಟ್ಟು ಇದರಿಂದ ಬರುವ ಬಡ್ಡಿ ಹಣವನ್ನು ಉಪಯೋಗಿಸುವುದು ಹಾಗೂ 05 ವರ್ಷಗಳ ನಂತರ ಠೇವಣಿ ಮೊತ್ತವನ್ನು ವಾಪಸ್ಸು ಪಡೆಯಬಹುದು ಅಥವಾ ಮುಂದುವರಿಸಬಹುದು. ಈ ಯೋಜನೆಯನ್ನು ದಿ: 29–08–2013 ರಿಂದ ಜಾರಿಗೊಳಿಸಿದೆ.

23. ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ:

2013–14ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣಗಳಿಗೆ ನಿಯಮಾನುಸಾರ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಪರೀಕ್ಷಾ ಶುಲ್ಕ ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ,

ಕ್ರೀಡಾ ಶುಲ್ಕ ಹಾಗೂ ಗ್ರಂಥಾಲಯ ಶುಲ್ಕಗಳನ್ನು ಮರುಪಾವತಿಸುವ ಯೋಜನೆಯು ಜಾರಿಗೆ ಬಂದಿದ್ದು, ಈ ಯೋಜನೆಯಡಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳಿಗೆ ಯಾವುದೇ ಆದಾಯಮಿತಿ ಇರುವುದಿಲ್ಲ, ಅಂಗವಿಕಲರ ಅಧಿನಿಯಮದಲ್ಲಿ ಸೂಚಿಸಿರುವ ಹಾಗೂ ವೈದ್ಯಕೀಯ ಮಂಡಳಿಯವರು ಶಿಫಾರಸ್ಸು ಮಾಡಿರುವ ವಿಕಲಚೇತನ ಅಭ್ಯರ್ಥಿಗಳು ಮಾತ್ರ ಯೋಜನೆಗೆ ಅರ್ಹರಾಗಿರುತ್ತಾರೆ.

24. ದೃಷ್ಟಿದೋಷವುಳ್ಳ ಮಹಿಳೆಯವರಿಗೆ ಜನಿಸುವ ಮಕ್ಕಳಿಗೆ ಶಿಶುಪಾಲನಾ ಭತ್ಯೆ:

ದೃಷ್ಟಿದೋಷವುಳ್ಳ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ 2 ಹೆರಿಗೆಯವರೆಗೆ ಪ್ರತಿ ಹೆರಿಗೆಯ ನಂತರ 2 ವರ್ಷ ಅವಧಿಗೆ ತಿಂಗಳಿಗೆ ರೂ.2000/–ಗಳ ಶಿಶುಪಾಲನಾ ಭತ್ಯೆಯನ್ನು ನೀಡಲು ಯೋಜನೆ ಜಾರಿಗೊಳಿಸಿದೆ. ಅವರುಗಳ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷಗಳ ಒಳಗಿರಬೇಕು. ಶಿಶುಪಾಲನ ಭತ್ಯೆಯನ್ನು ಮಗುವಿನ ಆರೋಗ್ಯ, ಪೌಷ್ಟಿಕ ಆಹಾರ ಮತ್ತು ಪಾಲನೆಗೆ ಮಾತ್ರ ಬಳಸಬೇಕಾಗುವುದು.

25. ವಿಕಲಚೇತನ ಮಕ್ಕಳಿಗೆ ಹಗಲು ಯೋಗಕ್ಷೇಮ ಕೇಂದ್ರ ಪ್ರಾರಂಭಿಸುವ ಬಗ್ಗೆ:

6 ರಿಂದ 18 ವರ್ಷದ ವಯೋಮಾನದವರೆಗಿನ ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಹಾಗೂ ತೀವ್ರತರನಾದ ವಿಕಲಚೇತನ ಮಕ್ಕಳಿಗೆ ಎರಡು ಹಗಲು ಯೋಗಕ್ಷೇಮ ಕೇಂದ್ರಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಸ್ಥಾಪಿಸಲು ಹಾಗೂ ಈ ಕೇಂದ್ರಗಳನ್ನು "ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ರಾಜ್ಯ ಸಹಾಯಧನ ಯೋಜನೆ" ಯಡಿ ಅಳವಡಿಸಿ ಯೋಜನೆಯನ್ನು ಜಾರಿಗೊಳಿಸಿದೆ. ತೀವ್ರ ತೆರನಾದ ವಿಕಲಚೇತನ ಮಕ್ಕಳ ಪೋಷಕರು ತಮ್ಮ ಜೀವನೋಪಾಯಕ್ಕೆ ಉದ್ಯೋಗದಲ್ಲಿ ತೊಡಗಿರುವ ಹಿನ್ನೆಲೆಯಲ್ಲಿ ಇಂತಹ ಮಕ್ಕಳ ರಕ್ಷಣೆ, ವಸತಿ, ಶಿಕ್ಷಣ ಮತ್ತು ಆಹಾರ ನೀಡುವ ಉದ್ದೇಶದಿಂದ ಪ್ರಾರಂಭದಲ್ಲಿ ಪ್ರಯೋಗಿಕವಾಗಿ ಬೆಂಗಳೂರು ನಗರದಲ್ಲಿ ಎರಡು ಕೇಂದ್ರಗಳನ್ನು ಸ್ಥಾಪಿಸಲಾಗಿದೆ.

26. ಅಂಗವಿಕಲ ಮಕ್ಕಳ ಕೇಂದ್ರಿಕೃತ ವಿಶೇಷ ಶೈಕ್ಷಣಿಕ ಯೋಜನೆ:

ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿರುವ ವಿಶೇಷ ಶಾಲೆಗಳಿಗೆ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಸಹಾಯಾನುದಾನ ನೀಡಲು 2010–11ನೇ ಸಾಲಿನಲ್ಲಿ ಅಂಗವಿಕಲ ಮಕ್ಕಳ ಶಿಶು ಕೇಂದ್ರಿಕೃತ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದ್ದು, ವಸತಿಯುತ ಪ್ರತಿ ಮಗುವಿಗೆ ಮಾಹೆಯಾನ ರೂ. 5000/– ರಂತೆ ಹಾಗೂ ವಸತಿ ರಹಿತ ಮಗುವಿಗೆ ಮಾಹೆಯಾನ ರೂ. 4000/– ರಂತೆ ವರ್ಷದಲ್ಲಿ ಹತ್ತು ತಿಂಗಳ ಅವಧಿಗೆ ಅನುದಾನ ನೀಡಲಾಗುತ್ತಿದೆ, ಈ ಅನುದಾನದಲ್ಲಿ ಶಿಕ್ಷಕರ ಗೌರವಧನ ಒಳಗೊಂಡಿರುತ್ತದೆ.

2014–15ನೇ ಸಾಲಿನಲ್ಲಿ ಜಾರಿಗೆ ಬಂದಿರುವ ಹೊಸ ಯೋಜನೆಗಳು

27. ನಿರಾಮಯ ಆರೋಗ್ಯ ವಿಮಾ ಯೋಜನೆ:

ಬುದ್ದಿಮಾಂದ್ಯ, ಸೆರಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲತೆಗೆ ಒಳಗಾದ ಬಡತನ ರೇಖೆಗಿಂತ ಕೆಳಗಿರುವ ಕುಟುಂಬದ ವಿಕಲಚೇತನರಿಗೆ ನಿರಾಮಯ ಎಂಬ ಆರೋಗ್ಯ ವಿಮಾ ಯೋಜನೆಯನ್ನು ಜಾರಿಗೆ ತಂದಿದ್ದು, ಪ್ರತಿ ವ್ಯಕ್ತಿಗೆ ಒಂದು ಬಾರಿಗೆ ರೂ. 250/– ಗಳನ್ನು ಪಾವತಿಸಲಾಗುವುದು. ಪ್ರತಿ ವರ್ಷ ಯೋಜನೆಯಡಿ ಬರುವ ಫಲಾನುಭವಿಗಳು ರೂ.1.00 ಲಕ್ಷಗಳವರೆಗೆ ವೈದ್ಯಕೀಯ ಸೌಲಭ್ಯ ಪಡೆಯಬಹುದಾಗಿರುತ್ತದೆ.

28. ವಿಕಲಚೇತನರಿಗೆ ನಿರುದ್ಯೋಗ ಭತ್ಯೆ:

ಎಸ್.ಎಸ್.ಎಲ್.ಸಿ. ಹಾಗೂ ನಂತರದ ವಿದ್ಯಾರ್ಹತೆ ಹೊಂದಿರುವ ನಿರುದ್ಯೋಗಿ ವಿಕಲಚೇತನರಿಗೆ ನಿರುದ್ಯೋಗ ಭತ್ಯೆಯನ್ನು ನೀಡುವ ಯೋಜನೆ ಇದಾಗಿದ್ದು, ಯೋಜನೆ ಅನುಷ್ಠಾನ ಪ್ರಗತಿಯಲ್ಲಿದೆ.

29. ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್ ಟಾಪ್:

ಎಸ್.ಎಸ್.ಎಲ್.ಸಿ. ಹಾಗೂ ನಂತರದ ವ್ಯಾಸಂಗ ಮಾಡುವ ದೃಷ್ಟಿದೋಷವುಳ್ಳ ವಿಕಲಚೇತನ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣವನ್ನು ಪಡೆಯಲು ಅನುಕೂಲವಾಗುವಂತೆ ಮಾತನಾಡುವ (ಟಾಕಿಂಗ್) ಲ್ಯಾಪ್‌ಟಾಪ್‌ಗಳನ್ನು ಒದಗಿಸುವ ಕಾರ್ಯ ಪ್ರಗತಿಯಲ್ಲಿದೆ.

30. ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ:

20 ರಿಂದ 60 ವರ್ಷದ ವಯೋಮಾನದ ತೀವ್ರತರವಾದ ದೈಹಿಕ ವಿಕಲಚೇತನರ ಕುಟುಂಬದ ವಾರ್ಷಿಕ ವರಮಾನ ರೂ.2.00 ಲಕ್ಷಗಳಿಗಿಂತ ಕಡಿಮೆ ಇರುವ ವಿಕಲಚೇತನರಿಗೆ ಅನುಕೂವಾಗುವಂತೆ ಜೀವಿತ ಕಾಲದಲ್ಲಿ ಒಂದು ಬಾರಿ ಯಂತ್ರಚಾಲಿತ ದ್ವಿಚಕ್ರ ವಾಹನವನ್ನು ನೀಡಲಾಗುವುದು.

ಖಾಸಗಿ ಶಾಲಾ ಕಾಲೇಜುಗಳನ್ನು ಅನುದಾನಕ್ಕೊಳಪಡಿಸುವುದು

1457(1359); ಶ್ರೀ ಕೋನರೆಡ್ಡಿ ಎನ್.ಎಚ್. (ನವಲಗುಂದ)

ಅ) ಈ ಹಿಂದೆ 1994–95 ರವರೆಗೆ ಅನುದಾನರಹಿತವಾಗಿ ನಡೆಯುತ್ತಿರುವ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಿರುವುದು ನಿಜವೇ;

ಆ) ಹಾಗಿದ್ದಲ್ಲಿ, 1995 ರಿಂದ ನಡೆಯುತ್ತಿರುವ ಖಾಸಗಿ ಅನುದಾನರಹಿತ ಶಾಲಾ–ಕಾಲೇಜುಗಳನ್ನು ಅನುದಾನಕ್ಕೊಳಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ, ಯಾವಾಗ ಅನುದಾನಕ್ಕೆ ಒಳಪಡಿಸಲಾಗುವುದು;

ಈ) ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಈ ಶಾಲೆಗಳಿಗೆ ಅನುದಾನವನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ;

ಉ) ಹಾಗಿಲ್ಲದಿದ್ದಲ್ಲಿ ಸದರಿ ಶಾಲೆಗಳಿಗೆ ಅನುದಾನ ಒದಗಿಸಲು ಇರುವ ತೊಂದರೆಗಳೇನು?